ಕೊಡಬೇಕೆಂದು ಹೇಳಿ ಮಾನ್ಯ ಮಾಧುಸ್ವಾಮಿ ಯವರು ಹಾಗೂ ಇತರ ಸದಸ್ಯರುಗಳು ಹೇಳಿದ್ದಾರೆ. ಆ ಹಿರಿಯ ಸದಸ್ಯರುಗಳು ಹೇಳಿರುವುದು ಸರಿ ಇದೆ. ಮುಂದೆ ಬರುವ ದಿವಸಗಳಲ್ಲಿ ಇದೆಲ್ಲಾ ಕೊರತೆಗಳನ್ನು ಸರಿಪಡಿಸಿಕೊಳ್ಳುವಂತಹ ಪ್ರಾಮಾಣಿಕ ಪ್ರಯತ್ನ ನಾನು ಮಾಡುತ್ತೇನೆ ಎಂದು ಹೇಳುತ್ತೇನೆ.

ಶ್ರೀ ಆರಗ ಜ್ಞಾನೇಂದ್ರ : 62 ಕೋಟಿ ರೂಪಾಯಿ ಆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಫೀ ಇಂಬರ್ಸ್‌ಮೆಂಟ್ ವಿಚಾರ ಹೇಳುತ್ತಿದ್ದೇನೆ.

ಶ್ರೀ ಬಿ.ಎಸ್. ಯಡಿಯೂರಪ್ಪ : 400 ಕೋಟಿ ರೂಪಾಯಿ ಬಡ್ಡಿಗೆ ಕೊಡುತ್ತೇವೆಂದೂ ಹೇಳಿದ್ದೇವೆ. ಹಾಸ್ಟೆಲ್‌ಗಳ ಬಗ್ಗೆ ಮಾನ್ಯ ಜ್ಞಾನೇಂದ್ರ ಅವರು ಗಮನಕ್ಕೆ ತಂದಿದ್ದಾರೆ. ಅದನ್ನು ಸರಿ ಪಡಿಸುತ್ತೇನೆ. ಅದರ ಬಗ್ಗೆ ನಾನು ನೋಡಿ ಬಿಟ್ಟು ಹೇಳುತ್ತೇನೆ. ಆ ಕಡೆಗೆ ಗಮನವನ್ನು ಕೊಡುತ್ತೇನೆ.

ಶ್ರೀ ಆರಗ ಜ್ಞಾನೇಂದ್ರ : ಫೀ ಇಂಬರ್ಸ್ ಮಾಡಿ ಸಾರ್.

ಶ್ರೀ ಜೆ.ಸಿ.ಮಾಧುಸ್ವಾಮಿ : ಲಾಸ್ ಆಫ್ ಫೀ ಇನ್‌ಕಂ ತಾನೇ ಅದು. ಲಾಸ್ ಆಫ್ ಫೀ ಇನ್‌ಕಂ ಯೂನಿವರ್ಸಿಟಿಯಿಂದ ಕಾಲೇಜುಗಳಿಗೆ ಹೋಗಬೇಕಾಗಿದೆ ಅದು ಹಾಸ್ಟೆಲ್ ವಿಚಾರ ಅಲ್ಲ. ಅದರ ವಿಚಾರ ಹೇಳಬೇಕು.

ಶ್ರೀ ಬಿ.ಎಸ್. ಯಡಿಯೂರಪ್ಪ (ಹಣಕಾಸು ಸಚಿವರು ಹಾಗೂ ಮಾನ್ಯ ಉಪ ಮುಖ್ಯಮಂತ್ರಿಗಳು): ಸನ್ಮಾನ್ಯ ಅಧ್ಯಕ್ಷರೆ, "ದಿನಾಂಕ 31.03.2006 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 28 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಬರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗೂ ಸೇರಿ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿರುವ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆಯು ಮಂಜೂರು ಮಾಡಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : 2005–06ನೇ ಸಾಲಿನ ಪೂರಕ ಅಂದಾಜುಗಳು ಮೂರನೇ ಹಾಗೂ ಅಂತಿಮ ಕಂತು) ಬೇಡಿಕೆಗಳ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ :–

"ದಿನಾಂಕ 31.03.2006ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 28 ಇವುಗಳಿಗೆ ಸಂಬಂಧಿಸಿದಂತೆ ಸಂದಾಯ ಆಗುವ ವೆಚ್ಚವನ್ನು ಬರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗೂ ಸೇರಿ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿರುವ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆಯು ಮಂಜೂರು ಮಾಡುವುದು.

ಪ್ರಸ್ತಾವವನ್ನು ಅಂಗೀಕರಿಸಲಾಯಿತು.

ಆ) ಕರ್ನಾಟಕ ಧನ ವಿನಿಯೋಗ (ಸಂಖ್ಯೆ) 2 ವಿಧೇಯಕ 2006

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, 2006ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ2) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"2006ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ–2) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ (ಉಪಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು):– ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ–2) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, ' 2006ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 2)ರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ:

" 2006ರ ಕರ್ನಾಟಕ ಧನ ವಿನಿಯೋಗ(ಸಂಖ್ಯೆ 2) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಹಾಗೂ 3

ಪ್ರಸ್ತಾವ ಏನೆಂದರೆ :–

ಅಧ್ಯಕ್ಷರು: "ಖಂಡ 2 ಹಾಗೂ 3ನೇ ಖಂಡಗಳು ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಹಾಗೂ 3ನೇ ಖಂಡಗಳು ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"ಮೊದಲನೆಯ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಪಟ್ಟು ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಪಟ್ಟು ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2006ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ–2) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"2006ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ2) ವಿಧೇಯಕವನ್ನು ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು.

ಅಧ್ಯಕ್ಷರು: ಮಾನ್ಯ ಪ್ರಕಾಶ್ ಅವರೇ, ಈಗ ಆಯವ್ಯಯದ ಮೇಲೆ ಚರ್ಚೆ ಪ್ರಾರಂಭ ಮಾಡಿ.

4. ವಿತ್ತೀಯ ಕಾರ್ಯಕಲಾಪ

2006–07ನೇ ಸಾಲಿನ ಆಯವ್ಯಯ ಮೇಲಿನ ಚರ್ಚೆ (ಮುಂದುವರಿದುದ್ದು)

ಶ್ರೀ ಎಂ.ಪಿ. ಪ್ರಕಾಶ್ (ಹೂವಿನ ಹಡಗಲಿ) : ಸನ್ಮಾನ್ಯ ಅಧ್ಯಕ್ಷರೆ, 2006–ಹಾಗೂ 2007ರ ಆಯವ್ಯಯವನ್ನು ಮಾನ್ಯ ಹಣಕಾಸಿನ ಸಚಿವರು ಹಾಗೂ ಉಪ ಮುಖ್ಯಮಂತ್ರಿಗಳು ಮಂಡಿಸಿದ್ದಾರೆ. ಇದು ನಿಜವಾಗಿಯೂ ಕೂಡ ಒಂದು ಹೊಸ ಸರ್ಕಾರದ ಉತ್ತಮವಾಗಿರತಕ್ಕಂಥ ಬಜೆಟ್ ಆಗಿದೆ.

ಶ್ರೀ ಜೆ.ಸಿ. ಮಾಧುಸ್ವಾಮಿ : ಏನು ಮೀಸೆ ಬಿಟ್ಟಿದ್ದೀರಲ್ಲಾ, ಯಾರನ್ನಾದರೂ ಚುಡಾಯಿಸುವುದಕ್ಕೆ ಹೊರಟಿದ್ದೀರಾ? ಅಧ್ಯಕ್ಷರಾದ ಮೇಲೆ ಚುಡಾಯಿಸಲು ಹೊರಟಿದ್ದೀರಾ ಎಂಬುದು ನಮಗೆ ಅರ್ಥ ಆಗಲಿಲ್ಲ.

ಶ್ರೀ ಬಿ. ಶಿವರಾಮು : ನಾವೂ ಸಹ ಅದನ್ನೇ ಚರ್ಚೆ ಮಾಡುತ್ತಿದ್ದೇವೆ. ಮಾನ್ಯ ಪ್ರಕಾಶ್ ಅವರು ಮೀಸೆ ಬಿಟ್ಟು ಬಿಟ್ಟರಲ್ಲಾ. ಏನು ವಿಶೇಷ ಎಂದು ಹೇಳಿ.

ಶ್ರೀ ಜೆ.ಸಿ. ಮಾಧುಸ್ವಾಮಿ : ನಮ್ಮ ಮೇಲೆ ಯುದ್ಧಕ್ಕೆ ಕಟ್ಟಿದ ಹಾಗೆ ಆಯಿತಲ್ಲಾ.

ಶ್ರೀ ಕೆ. ಶ್ರೀನಿವಾಸಗೌಡ : ಕೆಳಗಡೆ ಬಿದ್ದರೂ ಕೂಡ ಮೀಸೆ ಮಣ್ಣಾಗಲಿಲ್ಲ. ಈ ರೀತಿ ನಮ್ಮ ಕಡೆ ಗಾದೆ ಇದೆ. ಕೆಳಗಡೆ ಬಿದ್ದರೂ ಕೂಡ ಮೀಸೆ ಮಣ್ಣಾಗಲಿಲ್ಲ.